# ಕರ್ನಾಟಕ ವಿಧಾನ ಪರಿಷತ್

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ** | 1159 |
| **ಸದಸ್ಯರ ಹೆಸರು** | ಶ್ರೀ ಸಿ. ಪಿಯೋಗೇಶ್ವರ (ನಾಮನಿರ್ದೇಶನ ಹೊಂದಿದವರು) |
| **ಉತ್ತರಿಸಬೇಕಾದ ದಿನಾಂಕ** | 15.12.2023 |
| **ಉತ್ತರಿಸುವವರು** | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ<br>ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| **ಅ.** | ಸರ್ಕಾರವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಇಲ್ಲಿಯವರೆಗೆ ಎಷ್ಟು ಬದಲಿ ಕಾಮಗಾರಿಗಳ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಲಾಗಿದೆ; (ವಿಧಾನಸಭಾ ಕ್ಷೇತ್ರವಾರು ಬದಲಿ ಕಾಮಗಾರಿಗಳ ಆದೇಶದ ಪ್ರತಿಯೊಂದಿಗೆ ವಿವರ ಒದಗಿಸುವುದು) | ಪ್ರಸ್ತುತ ಈ ಹಿಂದಿನ ಸಾಲುಗಳಲ್ಲಿ ಮಂಜೂರಾತಿ ನೀಡಿದ ಕಾಮಗಾರಿಗಳಲ್ಲಿ ಯಾವುದೇ ರಸ್ತೆ ಕಾಮಗಾರಿಗಳನ್ನು ಬದಲಾವಣೆ ಮಾಡಿ ಪ್ರಾರಂಭಿಸಬೇಕಾದಲ್ಲಿ ಆರ್ಥಿಕ ಇಲಾಖೆಯ ಸುತ್ತೋಲೆಯ ದಿನಾಂಕ: 31.07.2023 ರನ್ವಯ ನಿಯಾಮಾನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.<br><br>ಆದ್ದರಿಂದ, ಈ ಸಾಲಿನಲ್ಲಿ ರಸ್ತೆ ಬದಲಾವಣೆ ಮಾಡಲು ಅವುಗಳ ಅಗತ್ಯತೆ ಮತ್ತು ಅನುದಾನದ ಲಭ್ಯತೆಯನ್ನಾಧರಿಸಿ ಕ್ರಮ ಕೈಗೊಳ್ಳಬೇಕಿದೆ.<br><br>ಇದುವರೆವಿಗೂ ಯಾವುದೇ ಬದಲಾವಣೆ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಿರುವುದಿಲ್ಲ. |
| **ಆ** | ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಸಾರ್ವಜನಿಕ ಹಿತದೃಷ್ಠಿಯಿಂದ ಈ ಹಿಂದೆ ಮಂಜೂರು ಮಾಡಲಾಗಿದ್ದ ಕಾಮಗಾರಿಗಳನ್ನು ಬದಲಾವಣೆ ಮಾಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದ್ದರೂ ಈವರೆಗೆ ಅನುಮೋದನೆ ಆಗದೇ ಅಗತ್ಯ ಆದೇಶವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಬದಲಿ ಕಾಮಗಾರಿಗೇ ಆದೇಶ ನೀಡದಿರಲು ಕಾರಣವೇನು; | 2022-23ನೇ ಸಾಲಿಗೆ ಲೆ.ಶೀ. 5054 ರ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ರೂ. 25.00 ಕೋಟಿಗಳನ್ನು ಹಂಚಿಕೆ ಮಾಡಿರುವ ಮೊತ್ತಕ್ಕೆ 19 ರಸ್ತೆ ಕಾಮಗಾರಿಗಳ ಪಟ್ಟಿಯನ್ನು ಪ್ರಸ್ತಾಪಿಸಿ ಅನುಮೋದನೆ ನೀಡುವಂತೆ ಕೋರಿದ್ದರ ಮೇರೆಗೆ ಆರ್ಥಿಕ ಇಲಾಖೆಯ ಅ.ಟಿ. ಸಂ: ಆಇ :507:ವೆಚ್ಚ-06/2023, ದಿನಾಂಕ: 13.09.2023 ರಲ್ಲಿ ಸದರಿಯವರ ಪ್ರಸ್ತಾವನೆ ಕುರಿತು ಆರ್ಥಿಕ ಇಲಾಖೆಯ ಸುತ್ತೋಲೆಯ ದಿನಾಂಕ: 31.07.2023 ರನ್ವಯ ನಿಯಾಮಾನುಸಾರ ಪರಿಶೀಲಿಸಿ ಮುಂದಿನ ಕ್ರಮ ವಹಿಸುವಂತೆ ಸೂಚಿಸಿದ್ದು,<br><br>ಅದರಂತೆ, ಸಲ್ಲಿಸಿರುವ ಕಾಮಗಾರಿಗಳ ಅಗತ್ಯತೆ ಮತ್ತು ಅನುದಾನದ ಲಭ್ಯತೆಗನುಗುಣವಾಗಿ ಕಾಮಗಾರಿಗಳನ್ನು ಕೈಗೊಳ್ಳಲು ಅನುಮೋದನೆ ನೀಡಲು ಕ್ರಮ ಕೈಗೊಳ್ಳಬೇಕಿದೆ. |
| **ಇ** | ಬದಲಿ ಕಾಮಗಾರಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಗೆ ಅನುಮೋದನೆ ನೀಡಲು ಕುರಿತು ಸರ್ಕಾರದ ನಿಲುವೇನು? | |

**ಗ್ರಾಅಪ/ಆರ್‌ಆರ್‌ಸಿ/151ನೇಅ/LCQ-1190/2023**

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿಮತ್ತುಪಂಚಾಯತ್ ರಾಜ್ ಇಲಾಖೆ
ಹಾಗೂಮಾಹಿತಿತಂತ್ರಜ್ಞಾನಮತ್ತುಜೈವಿಕತಂತ್ರಜ್ಞಾನಸಚಿವರು